# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

**ಸಂಖ್ಯೆ: ಸಿ.ಎಸ್1/ ಗ.ಶಾ/ಎಸ್.ಎಸ್.ಎಲ್.ಸಿ/ಆ.ಅಂ.ನಮೂದು/01/2023-24** **ದಿನಾಂಕ: 19-02-2024**

**- ಸುತ್ತೋಲೆ -**

**ವಿಷಯ:** 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-1ಕ್ಕೆ ನೋಂದಣಿಯಾಗಿರುವ ಶಾಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡುವ ಬಗ್ಗೆ.

**ಉಲ್ಲೇಖ:** ಮಂಡಲಿಯ ಮಾರ್ಗಸೂಚಿ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿ/ ಮಾರ್ಚ್-24/14/2023-24 ದಿನಾಂಕ: 04-10-2023

********

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ವತಿಯಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರಿಗೆ ತಮ್ಮ ಶಾಲೆಯ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆಯಲಿರುವ ಶಾಲಾ ವಿದ್ಯಾರ್ಥಿಗಳ (CCERF) ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು **ದಿನಾಂಕ: 20-02-2024** ರಿಂದ ಅವಕಾಶ ಕಲ್ಪಿಸಲಾಗಿದೆ.

ಮಂಡಲಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು ಸೂಚಿಸಿದೆ.

1. ಮಂಡಲಿಯ ಜಾಲತಾಣ https://kseab.karnataka.gov.in/ ನ ಶಾಲಾ ಲಾಗಿನ್‌ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ಕರಡು ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿರುವ ತಂತ್ರಾಂಶದ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಸಿ ಆಂತರಿಕ ಅಂಕಗಳನ್ನು ಅಪ್‌ಡೇಟ್ ಮಾಡುವುದು.
3. ಲಾಗಿನ್ ಆದ ನಂತರ ಮೊದಲು Internal Marks Entry - 2024 ಮೇಲೆ ಕ್ಲಿಕ್ ಮಾಡಬೇಕು. ತೆರೆಯಲಾಗುವ ವೆಬ್‌ಪೇಜ್‌ನಲ್ಲಿ ವಿದ್ಯಾರ್ಥಿಯ ಎಸ್.ಎ.ಟಿ.ಎಸ್ (SATS NUMBER) ಸಂಖ್ಯೆಯನ್ನು ನಮೂದಿಸಿ Enter ಬಟನ್‌ನ್ನು ಒತ್ತುವುದು. ಆಗ ಉಲ್ಲೇಖಿತ ಮಾರ್ಗಸೂಚಿಯಲ್ಲಿ ವಿವರಿಸಿರುವಂತೆ, **ಪ್ರತಿ ವಿದ್ಯಾರ್ಥಿಯು ಕನಿಷ್ಠ ಶೇಕಡಾ 75ರಷ್ಟು ಹಾಜರಾತಿಯನ್ನು ಹೊಂದಿರುವ ಬಗ್ಗೆ 'Yes' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳಿಗೆ ಮಾತ್ರ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಲಾಗಿದೆ. 'No' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ನೀಡಿರುವುದಿಲ್ಲ. ಅಂದರೆ ಆ ವಿದ್ಯಾರ್ಥಿಯು 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ-1, ಪರೀಕ್ಷೆ-2 ಮತ್ತು ಪರೀಕ್ಷೆ-3 ನ್ನು ಬರೆಯಲು ಅರ್ಹನಿರುವುದಿಲ್ಲ, 2024-25ನೇ ಸಾಲಿನಲ್ಲಿ ಶಾಲೆಗೆ ಮರು ದಾಖಲಾಗಿ ಪರೀಕ್ಷೆ ತೆಗೆದುಕೊಳ್ಳುವುದು ಎಂದರ್ಥ.**
4. **ನಿಗದಿತ ಹಾಜರಾತಿ 'No' ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಗಳ ಮಾಹಿತಿಯನ್ನು ಸಹ Save ಮಾಡಿ Freeze ಮಾಡುವುದು ಕಡ್ಡಾಯವಾಗಿರುತ್ತದೆ. ಈ ವಿದ್ಯಾರ್ಥಿಗಳ ನೋಂದಣಿಯನ್ನು ರದ್ದುಪಡಿಸಲಾಗುವುದು ಮತ್ತು ಅಂತಿಮ ಪ್ರವೇಶ ಪತ್ರವನ್ನು ನೀಡಲಾಗುವುದಿಲ್ಲ.**
5. ನಿಗದಿತ ಹಾಜರಾತಿ **'Yes'** ಎಂದು Select ಮಾಡಲ್ಪಟ್ಟ ವಿದ್ಯಾರ್ಥಿಯ ಎಲ್ಲಾ ಮಾಹಿತಿಗಳು Display ಆಗುತ್ತವೆ. ಈ ಎಲ್ಲಾ ಮಾಹಿತಿಗಳು ಆಂತರಿಕ ಅಂಕಗಳನ್ನು ನಮೂದು ಮಾಡುತ್ತಿರುವ ನಿರ್ದಿಷ್ಟ ವಿದ್ಯಾರ್ಥಿಯದೇ ಎಂದು ಖಚಿತಪಡಿಸಿಕೊಂಡು ನಂತರ ಆಂತರಿಕ ಅಂಕಗಳನ್ನು ನಮೂದಿಸುವುದು.
6. ವಿದ್ಯಾರ್ಥಿಯು ತೆಗೆದುಕೊಂಡಿರುವ ಭಾಷೆ ಮತ್ತು ವಿಷಯಗಳು ಹಾಗೂ ತಂತ್ರಾಂಶದಲ್ಲಿ Display ಆಗಿರುವ ಭಾಷೆ ಮತ್ತು ವಿಷಯಗಳು ಹೊಂದಾಣಿಕೆಯಾಗುತ್ತಿವೆ ಎಂಬುದನ್ನು ಖಚಿತಪಡಿಸಿಕೊಂಡು, ಆಯಾ ಭಾಷೆ ಮತ್ತು ವಿಷಯಗಳಿಗೆ ಅನುಗುಣವಾಗಿ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡುವುದು.

7. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಿದ ನಂತರ Print ಸೌಲಭ್ಯ ನೀಡಲಾಗಿದೆ. ವಿದ್ಯಾರ್ಥಿವಾರು ವರದಿಯ ಪ್ರಿಂಟ್ ಪಡೆಯುವುದು ಕಡ್ಡಾಯವಾಗಿದ್ದು, ಪ್ರಿಂಟ್ ಪಡೆಯದಿದ್ದಲ್ಲಿ Freeze ಆಯ್ಕೆ ತೆರೆದುಕೊಳ್ಳುವುದಿಲ್ಲ. Print Out ಪಡೆದುಕೊಂಡು, ನಮೂದಿಸಿರುವ ಅಂಕಗಳು ಸರಿಯಾಗಿವೆಯೇ ಎಂಬುದನ್ನು ಪರಿಶೀಲಿಸುವುದು. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Freeze ಮಾಡುವ ಮುನ್ನ ವಿದ್ಯಾರ್ಥಿಯ ಆಂತರಿಕ ಅಂಕಗಳ ವರದಿಯ ಬಗ್ಗೆ ವಿದ್ಯಾರ್ಥಿಯ ಪೋಷಕರಿಗೆ ಮಾಹಿತಿ ನೀಡಿ ಪ್ರತಿ ಪೋಷಕರ ಸಹಿ ಪಡೆಯುವುದು ಕಡ್ಡಾಯವಾಗಿದೆ.
8. **ಆಂತರಿಕ ಅಂಕಗಳನ್ನು Freeze ಮಾಡುವ ಬಗ್ಗೆ:-** ಪ್ರತಿ ವಿದ್ಯಾರ್ಥಿಯ ಮಾಹಿತಿಯನ್ನು Print ತೆಗೆದು, ಪರಿಶೀಲಿಸಿದ ನಂತರ **Clear ಮಾಡಿ ಮತ್ತೊಮ್ಮೆ SATS ಸಂಖ್ಯೆ ನಮೂದಿಸಿ Enter ಬಟನ್ ಒತ್ತಿದಲ್ಲಿ ಮಾತ್ರ ಈಗಾಗಲೇ ನಮೂದಿಸಿರುವ ಅಂಕಗಳು, ಗ್ರೇಡ್‌ಗಳು ಮತ್ತು Freeze ಬಟನ್ ಗೋಚರವಾಗುತ್ತದೆ. Freeze ಮಾಡಿದ ನಂತರ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.**
9. ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ, ಭಾಷಾ ವಿನಾಯಿತಿಯನ್ನು ಪಡೆದಿರುವ ವಿಷಯಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಅಗತ್ಯವಿಲ್ಲ. ಈ ಆಯ್ಕೆಯನ್ನು ಸಹ ನೀಡಿರುವುದಿಲ್ಲ. ಕೆಲವು ಪ್ರಕರಣಗಳಲ್ಲಿ ಪರ್ಯಾಯ ಕೋರ್ ವಿಷಯಗಳನ್ನು ಬರೆಯಲು ಅನುಮತಿ ನೀಡಲಾಗಿದ್ದು, ಈ ವಿಷಯಗಳಿಗೆ ಸಂಬಂಧಿಸಿದ ಆಂತರಿಕ ಅಂಕಗಳನ್ನು ನಮೂದಿಸಬೇಕಾಗಿದೆ.
10. ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿದ ನಂತರ ಶಾಲೆಯ ಕ್ರೋಢೀಕೃತ ವರದಿಯನ್ನು (Consolidated Report) ಮುದ್ರಿಸಿಕೊಳ್ಳಬಹುದಾಗಿದೆ.
11. ಜೆ.ಟಿ.ಎಸ್ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸುವ ಜೊತೆಯಲ್ಲೇ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ನೀಡಲಾಗಿದ್ದು, ಸದರಿ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಯು ಮುಕ್ತಾಯಗೊಂಡ ನಂತರ, ರಾಜ್ಯದಲ್ಲಿರುವ 8 ಜೆ.ಟಿ.ಎಸ್ ಶಾಲೆಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಲಾಗುವುದು.
12. ಕಳೆದ ವರ್ಷ ಕೆಲವು ಶಾಲೆಗಳ ಮುಖ್ಯಸ್ಥರು ಪ್ರಥಮ ಭಾಷೆಯ ಗರಿಷ್ಠ ಅಂಕಗಳನ್ನು 25 ರ ಬದಲಾಗಿ 20 ಎಂದು ಭಾವಿಸಿ ಅಂಕಗಳನ್ನು ನಮೂದಿರುವುದು ಮತ್ತು ಇತರೆ ವಿಷಯಗಳ ಅಂಕಗಳನ್ನು ತಪ್ಪಾಗಿ ನಮೂದಿಸಿ (ಉದಾ: 20 ರ ಬದಲಾಗಿ 02) Freeze ಮಾಡಿ, ನಂತರ ತಿದ್ದುಪಡಿಗಾಗಿ ಮಂಡಲಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ದಂಡ ವಿಧಿಸಲಾಗುವುದು ಜೊತೆಗೆ ಮುಖ್ಯ ಶಿಕ್ಷಕರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು.

ಶಾಲಾ ಮುಖ್ಯಸ್ಥರು, ತಮ್ಮ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿ Freeze ಮಾಡಲು **29-02-2024 ಅಂತಿಮ ದಿನಾಂಕವಾಗಿರುತ್ತದೆ.** ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳಲ್ಲಿ ಆಂತರಿಕ ಅಂಕಗಳನ್ನು ನಮೂದಿಸುವ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಕ್ರಮವಹಿಸಲು ತಿಳಿಸಿದೆ.

ಮುಖ್ಯ ಶಿಕ್ಷಕರು ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡುವ ಸಂದರ್ಭದಲ್ಲಿ ಎದುರಾಗುವ ಪ್ರಶ್ನೆ/ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಮಂಡಲಿಯ ಸಹಾಯವಾಣಿ ಸಂಖ್ಯೆ – **08023310075** ಹಾಗೂ ಮಂಡಲಿಯ ಆಯಾ ಜಿಲ್ಲೆಗೆ ಸಂಬಂಧಪಟ್ಟ ಪರಿಶೀಲನಾ ಶಾಖಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

19/2/2024

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಶಾಲಾ ಲಾಗಿನ್ ಮುಖಾಂತರ